ಕರ್ನಾಟಕ ಸರ್ಕಾರ

ಆಯುಕ್ತರ ಕಛೇರಿ, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

## ತಾಂತ್ರಿಕ ಶಿಕ್ಷಣ ಇಲಾಖೆಯ ನಡವಳಿಗಳು

ವಿಷಯ: ತಾಂತ್ರಿಕ ಶಿಕ್ಷಣ ಇಲಾಖೆಯ ದತ್ತಾಂಶ ನಮೂದು ಸಹಾಯಕ(ಬೆರಳಚ್ಚುಗಾರರು) ಗಳಿಗೆ ಶೀಘ್ರಲಿಪಿಗಾರರ ಹುದ್ದೆಗೆ ಸ್ಥಾನಪನ್ನ ಮುಂಬಡ್ತಿ ನೀಡುವ ಬಗ್ಗೆ.

ಉಲ್ಲೇಖ:
1. ಈ ಕಛೇರಿ ಅಧಿಸೂಚನೆ ಸಂಖ್ಯೆ: ಡಿಟಿಇ/9/ಇಎಸ್‌ಟಿ(6)/2019, ದಿನಾಂಕ: 05.08.2019 ರಲ್ಲಿ ಪ್ರಕಟಿಸಲಾಗಿರುವ ತಾಂತ್ರಿಕ ಶಿಕ್ಷಣ ಇಲಾಖೆಯ ಹಿರಿಯ ಬೆರಳಚ್ಚುಗಾರರ ವೃಂದದ ಅಂತಿಮ ಜೇಷ್ಠತಾ ಪಟ್ಟಿ
2. ಈ ಕಛೇರಿ ಅಧಿಸೂಚನೆ ಸಂಖ್ಯೆ: ಡಿಟಿಇ/14/ಇಎಸ್‌ಟಿ(6)/2019, ದಿನಾಂಕ: 28.10.2019 ರ ಅನುಬಂಧ-2 ಮತ್ತು ಅನುಬಂಧ-3 ರಲ್ಲಿ ಪ್ರಕಟಿಸಲಾಗಿರುವ ತಾಂತ್ರಿಕ ಶಿಕ್ಷಣ ಇಲಾಖೆಯ ಬೆರಳಚ್ಚುಗಾರರ ಉಳಿದ ಮೂಲ ವೃಂದದ ಮತ್ತು ಸ್ಥಳೀಯ ವೃಂದ ವೃಂದದ ಅಂತಿಮ ಜೇಷ್ಠತಾ ಪಟ್ಟಿ
3. ದಿನಾಂಕ: 02.11.2021 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯ ನಡವಳಿಗಳು.
4. ಈ ಕಛೇರಿ ಜ್ಞಾಪನ ಸಂಖ್ಯೆ: DTE-ADMIOEST(4)/17/2021, ದಿನಾಂಕ: 27.12.2021

*****

**ಪ್ರಸ್ತಾವನೆ:**

ತಾಂತ್ರಿಕ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಶೀಘ್ರಲಿಪಿಗಾರರ ಹುದ್ದೆಗಳಿಗೆ ಹಿರಿಯ ದತ್ತಾಂಶ ನಮೂದು ಸಹಾಯಕರು ಹಾಗೂ ದತ್ತಾಂಶ ನಮೂದು ಸಹಾಯಕರ ಹುದ್ದೆಯಿಂದ ಶೇಕಡ 50 ರಷ್ಟು ಹುದ್ದೆಗಳನ್ನು ನೇರ ನೇಮಕಾತಿ ಹಾಗೂ ಶೇಕಡ 50 ರಷ್ಟು ಹುದ್ದೆಗಳನ್ನು ಬಡ್ತಿ ಮೂಲಕ ತುಂಬಲು ಅವಕಾಶ ಕಲ್ಪಿಸಲಾಗಿರುತ್ತದೆ. ಉಲ್ಲೇಖ(1) ಮತ್ತು (2) ರಂತೆ ಪ್ರಕಟಿಸಲಾಗಿರುವ ತಾಂತ್ರಿಕ ಶಿಕ್ಷಣ ಇಲಾಖೆಯ ಹಿರಿಯ ಬೆರಳಚ್ಚುಗಾರರ ವೃಂದದ ಹಾಗೂ ಬೆರಳಚ್ಚುಗಾರರ ಉಳಿದ ಮೂಲ ವೃಂದದ ಮತ್ತು ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದ ಅಂತಿಮ ಜ್ಯೇಷ್ಠತಾ ಪಟ್ಟಿಯ ಅನುಸಾರ ಶೀಘ್ರಲಿಪಿಗಾರರ ವೃಂದದಲ್ಲಿ ಖಾಲಿಯಿರುವ ಮುಂಬಡ್ತಿ ಹುದ್ದೆಗಳನ್ನು ಸ್ಥಾನಪನ್ನ ಮುಂಬಡ್ತಿ ಮೂಲಕ ತುಂಬಬೇಕಾಗಿರುತ್ತದೆ. ದಿನಾಂಕ: 02.11.2021 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ಖಾಲಿಯಿರುವ ಶೀಘ್ರಲಿಪಿಗಾರರ ಹುದ್ದೆಗಳನ್ನು ಜೇಷ್ಠತೆ ಹಾಗೂ ಅರ್ಹತೆ ಆಧಾರದ ಮೇಲೆ ಅರ್ಹ ದತ್ತಾಂಶ ನಮೂದು ಸಹಾಯಕರುಗಳಿಂದ ಮುಂಬಡ್ತಿ ಮೂಲಕ ಭರ್ತಿ ಮಾಡಲು ತೀರ್ಮಾನಿಸಲಾಗಿದೆ.

ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ತೆಗೆದುಕೊಂಡ ತೀರ್ಮಾನದಂತೆ ದತ್ತಾಂಶ ನಮೂದು ಸಹಾಯಕ ವೃಂದದಿಂದ ಶೀಘ್ರಲಿಪಿಗಾರರ ವೃಂದಕ್ಕೆ ಸ್ಥಾನಪನ್ನ ಬಡ್ತಿ ಹೊಂದಲು ಅರ್ಹರಿರುವ ದತ್ತಾಂಶ ನಮೂದು ಸಹಾಯಕರುಗಳು ಮೂರು ಸ್ಥಳ ಸೂಚಿಸಲು ಉಲ್ಲೇಖ (4) ರಲ್ಲಿ ಅವಕಾಶ ಕಲ್ಪಿಸಲಾಗಿತ್ತು. ಅದರಂತೆ ದತ್ತಾಂಶ ನಮೂದು ಸಹಾಯಕರುಗಳಿಗೆ ಶೀಘ್ರಲಿಪಿಗಾರರಾಗಿ ಸ್ಥಾನಪನ್ನ ಬಡ್ತಿ ನೀಡಿ ಸ್ಥಳನಿಯುಕ್ತಿ ಆದೇಶ ಹೊರಡಿಸಬೇಕಾಗಿರುವುದರಿಂದ, ಈ ಕೆಳಕಂಡ ಆದೇಶ.

### ಆದೇಶ ಸಂಖ್ಯೆ: DTE-ADMIOEST(4)/17/2021, ದಿನಾಂಕ: 31.12.2021

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ತಾಂತ್ರಿಕ ಶಿಕ್ಷಣ ಇಲಾಖೆಯ ಈ ಕೆಳಕಂಡ ದತ್ತಾಂಶ ನಮೂದು ಸಹಾಯಕರಿಗೆ ಗ್ರೂಪ್-ಸಿ ವೃಂದದ ರಾಜ್ಯ ವೇತನ ಶ್ರೇಣಿ ರೂ. 27650-650-29600-750-32600-850-36000-950-39800-1100-46400-1250-52650 ರಲ್ಲಿನ ಶೀಘ್ರಲಿಪಿಗಾರರ

ಹುದ್ದೆಗೆ ತಾತ್ಕಾಲಿಕವಾಗಿ ಹಾಗೂ ಮುಂದಿನ ಆದೇಶದವರೆಗೆ ಸ್ಥಾನಪನ್ನ ಬಡ್ತಿ ನೀಡಿ ಅವರ ಹೆಸರಿನ ಮುಂದೆ ಸೂಚಿಸಿರುವ ಖಾಲಿ ಹುದ್ದೆಗೆ ಎದುರಾಗಿ ಈ ಕೂಡಲೇ ಜಾರಿಗೆ ಬರುವಂತೆ ಸ್ಥಳನಿಯುಕ್ತಿಗೊಳಿಸಿ ಆದೇಶಿಸಿದೆ.

| ಕ್ರ ಸಂ | ದತ್ತಾಂಶ ನಮೂದು ಸಹಾಯಕರ ಹೆಸರು | ಕಾರ್ಯನಿರ್ವಹಿಸುತ್ತಿರುವ ಸಂಸ್ಥೆ | ಶೀಘ್ರಲಿಪಿಗಾರರ ಹುದ್ದೆಗೆ ಸ್ಥಾನಪನ್ನ ಬಡ್ತಿ ನೀಡಿ ಸ್ಥಳನಿಯುಕ್ತಿಗೊಳಿಸಲಾದ ಕಛೇರಿ / ಸಂಸ್ಥೆ | ಷರಾ |
|---|---|---|---|---|
| ಉಳಿದ ಮೂಲ ವೃಂದ | | | | |
| 1. | ವೈ. ಕಮಲ<br>ದತ್ತಾಂಶ ನಮೂದು ಸಹಾಯಕರು | ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಹಾಸನ | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾಸನ | ಖಾಲಿ ಹುದ್ದೆಗೆ ಎದುರಾಗಿ |
| 2. | ಸುಲೋಚನಾ ರಾಣಿ ಪಿ.<br>ದತ್ತಾಂಶ ನಮೂದು ಸಹಾಯಕರು | ಎಸ್.ಜೆ. ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು | ಆಯುಕ್ತರ ಕಛೇರಿ, ತಾಂತ್ರಿಕ ಶಿಕ್ಷಣ ಇಲಾಖೆ | ಖಾಲಿ ಹುದ್ದೆಗೆ ಎದುರಾಗಿ |
| 3. | ಸುಭಾಷ್ ಎಂ.ಆರ್.<br>ದತ್ತಾಂಶ ನಮೂದು ಸಹಾಯಕರು | ಸರ್ಕಾರಿ ಮಹಿಳಾ ವಸತಿ ಪಾಲಿಟೆಕ್ನಿಕ್, ಶಿವಮೊಗ್ಗ | ಸರ್ಕಾರಿ ಪಾಲಿಟೆಕ್ನಿಕ್, ಸೊರಬ | ಖಾಲಿ ಹುದ್ದೆಗೆ ಎದುರಾಗಿ |
| 4. | ಸರಸ್ವತಿ ಆರ್.<br>ದತ್ತಾಂಶ ನಮೂದು ಸಹಾಯಕರು | ಸರ್ಕಾರಿ ಪಾಲಿಟೆಕ್ನಿಕ್, ಅರಕೆರೆ, ಶ್ರೀರಂಗಪಟ್ಟಣ | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಚಾಮರಾಜನಗರ | ಖಾಲಿ ಹುದ್ದೆಗೆ ಎದುರಾಗಿ |
| 5. | ಸುಧಾ ಪೂಜಾರಿ<br>ದತ್ತಾಂಶ ನಮೂದು ಸಹಾಯಕರು | ಸರ್ಕಾರಿ ಪಾಲಿಟೆಕ್ನಿಕ್, ಗದಗ | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕಾರವಾರ | ಖಾಲಿ ಹುದ್ದೆಗೆ ಎದುರಾಗಿ |
| ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದ | | | | |
| 1. | ಗುಂಡಪ್ಪ<br>ದತ್ತಾಂಶ ನಮೂದು ಸಹಾಯಕರು | ಸರ್ಕಾರಿ ಪಾಲಿಟೆಕ್ನಿಕ್, ಕಾಳಗಿ | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಯಚೂರು | ಖಾಲಿ ಹುದ್ದೆಗೆ ಎದುರಾಗಿ |

ಮುಂಬಡ್ತಿ ಹೊಂದಿದ ಸಿಬ್ಬಂದಿಗಳು ಸ್ಥಾನಪನ್ನ ಮುಂಬಡ್ತಿ ಹುದ್ದೆಯಲ್ಲಿ ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 19(ಸಿ)ರ ಪ್ರಕಾರ ಒಂದು ವರ್ಷದ ಸ್ಥಾನಪನ್ನ ಅವಧಿಯನ್ನು ತೃಪ್ತಿಕರವಾಗಿ ಪೂರೈಸುವ ಷರತ್ತಿಗೊಳಪಟ್ಟಿದೆ.

ಬಡ್ತಿ ಹೊಂದಿರುವ ದತ್ತಾಂಶ ನಮೂದು ಸಹಾಯಕರು ಆದೇಶದ ಪ್ರತಿಯನ್ನು ಇಲಾಖಾ ವೆಬ್‌ಸೈಟ್‌ನಿಂದ ಪಡೆದು ಸ್ಥಳನಿಯುಕ್ತಿಗೊಳಿಸಲಾದ ಕಛೇರಿ / ಸಂಸ್ಥೆಯಲ್ಲಿ ಈ ಆದೇಶ ತಲುಪಿದ 15 ದಿನಗಳೊಳಗಾಗಿ ಕರ್ತವ್ಯಕ್ಕೆ ಹಾಜರಾಗಿ ವರದಿ ಮಾಡಿಕೊಳ್ಳತಕ್ಕದ್ದು, ತಪ್ಪಿದಲ್ಲಿ ಬಡ್ತಿಯು ಸ್ವಯಂಚಾಲಿತವಾಗಿ ರದ್ದಾಗುತ್ತದೆ

ಬಡ್ತಿ ಹೊಂದಿರುವ ದತ್ತಾಂಶ ನಮೂದು ಸಹಾಯಕರ ಪೈಕಿ ಯಾರಾದರೂ ಪ್ರಸ್ತುತ ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದಲ್ಲಿ, ಸದರಿ ನಿಯೋಜನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಿದೆ.

ಆಯುಕ್ತರು,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು

ಇವರಿಗೆ:-

1. ಸಂಬಂಧಪಟ್ಟ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಪಾಲಿಟೆಕ್ನಿಕ್ / ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರುಗಳಿಗೆ ಮಾಹಿತಿ ಮತ್ತು ಮುಂದಿನ ಕ್ರಮಕ್ಕಾಗಿ:
2. ಸಂಬಂಧಪಟ್ಟ ದತ್ತಾಂಶ ನಮೂದು ಸಹಾಯಕರಿಗೆ(ಸಂಬಂಧಿಸಿದ ಪ್ರಾಂಶುಪಾಲರು / ಮೇಲಾಧಿಕಾರಿಗಳ ಮೂಲಕ);
3. ತಾಂತ್ರಿಕ ಶಿಕ್ಷಣ ಇಲಾಖೆಯ ಎಲ್ಲಾ ಅಧಿಕಾರಿಗಳಿಗೆ;
4. ನೋಡಲ್ ಅಧಿಕಾರಿ, ಇ-ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು(ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು).

ಪ್ರತಿ:–

1. ಆಪ್ತ ಶಾಖೆ, ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
2. ಶಾಖಾ ರಕ್ಷಾ ಕಡತ.